## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1130 |
| ಸದಸ್ಯರ ಹೆಸರು | : | ಡಾ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.12.2025 |
| ಉತ್ತರಿಸುವವರು | : | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕದಲ್ಲಿ ಎಷ್ಟು ಗಣಿಗಾರಿಕೆ ಕಾರ್ಯನಿರ್ವಹಿಸುತ್ತಿವೆ ಮತ್ತು ತಾಂತ್ರಿಕ ಕಾರಣಗಳಿಂದ ಮುಚ್ಚಲಾದ ಗಣಿಗಾರಿಕೆಗಳ ಸಂಖ್ಯೆಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು) | ಕಲ್ಯಾಣ ಕರ್ನಾಟಕದಲ್ಲಿ ಮಂಜೂರು ಮಾಡಿರುವ ಹಾಗೂ ಮುಚ್ಚಲಾದ/ನಿಷ್ಕ್ರೀಯವಾಗಿರುವ ಮುಖ್ಯ ಖನಿಜ ಮತ್ತು ಉಪಖನಿಜ ಗಣಿ ಗುತ್ತಿಗೆಗಳ ವಿವರ. |

ಮುಖ್ಯಖನಿಜ ಗಣಿಗುತ್ತಿಗೆಗಳ ವಿವರ:

| ಕ್ರ. ಸಂ. | ಜಿಲ್ಲೆ | ಕಾರ್ಯನಿರತ ಗಣಿಗುತ್ತಿಗೆಗಳ ಸಂಖ್ಯೆ | ಮುಚ್ಚಲಾದ/ ನಿಷ್ಕ್ರಿಯವಾಗಿರುವ ಗಣಿಗುತ್ತಿಗೆಗಳ ಸಂಖ್ಯೆ |
|---|---|---|---|
| 1 | ಬಳ್ಳಾರಿ | 35 | 16 |
| 2 | ವಿಜಯನಗರ | 03 | 03 |
| 3 | ರಾಯಚೂರು | 02 | 03 |
| 4 | ಕೊಪ್ಪಳ | 0 | 0 |
| 5 | ಕಲಬುರಗಿ | 09 | 07 |
| 6 | ಬೀದರ್ | 0 | 0 |
| 7 | ಯಾದಗಿರಿ | 0 | 0 |
| ಒಟ್ಟು | | 49 | 29 |

ಉಪ ಖನಿಜ ಗಣಿಗುತ್ತಿಗೆಗಳ ವಿವರ:

| ಕ್ರ. ಸಂ. | ಜಿಲ್ಲೆ | ಅಲಂಕಾರಿಕ ಶಿಲೆ ಗಣಿಗುತ್ತಿಗೆಗಳ ಸಂಖ್ಯೆ | ಕಟ್ಟಡ ಕಲ್ಲು ಗಣಿ ಗುತ್ತಿಗೆಗಳ ಸಂಖ್ಯೆ | ಮರಳು ಗಣಿ ಗುತ್ತಿಗೆಗಳ ಸಂಖ್ಯೆ |
|---|---|---|---|---|
| 1 | ಬಳ್ಳಾರಿ | 9 | 75 | 6 |
| 2 | ವಿಜಯನಗರ | 0 | 123 | 10 |
| 3 | ರಾಯಚೂರು | 58 | 56 | 20 |
| 4 | ಕೊಪ್ಪಳ | 248 | 63 | 22 |
| 5 | ಕಲಬುರಗಿ | 0 | 266 | 19 |
| 6 | ಬೀದರ್ | 0 | 46 | 0 |
| 7 | ಯಾದಗಿರಿ | 1 | 29 | 4 |
| ಒಟ್ಟು | | 316 | 658 | 81 |

ಮುಚ್ಚಲಾದ/ನಿಷ್ಕ್ರಿಯವಾಗಿರುವ ಉಪಖನಿಜ ಗಣಿಗುತ್ತಿಗೆಗಳವಿವರ:

| ಕ್ರ. ಸಂ. | ಜಿಲ್ಲೆ | ಅಲಂಕಾರಿ ಕಶಿಲೆಗಣಿ ಗುತ್ತಿಗೆಗಳ ಸಂಖ್ಯೆ | ಕಟ್ಟಡ ಕಲ್ಲುಗಣಿ ಗುತ್ತಿಗೆಗಳ ಸಂಖ್ಯೆ | ಮರಳು ಗಣಿಗು ತ್ತಿಗೆಗಳ ಸಂಖ್ಯೆ |
|---|---|---|---|---|
| 1 | ಬಳ್ಳಾರಿ | 6 | 30 | 0 |
| 2 | ವಿಜಯನಗರ | 0 | 38 | 2 |
| 3 | ರಾಯಚೂರು | 23 | 14 | 6 |

<table>
<tr>
<td></td>
<td></td>
<td>
<table>
<tr><td>4</td><td>ಕೊಪ್ಪಳ</td><td>123</td><td>16</td><td>3</td></tr>
<tr><td>5</td><td>ಕಲಬುರಗಿ</td><td>0</td><td>39</td><td>6</td></tr>
<tr><td>6</td><td>ಬೀದರ್</td><td>0</td><td>10</td><td>0</td></tr>
<tr><td>7</td><td>ಯಾದಗಿರಿ</td><td>0</td><td>17</td><td>2</td></tr>
<tr><td colspan="2">ಒಟ್ಟು</td><td>152</td><td>164</td><td>19</td></tr>
</table>
</td>
</tr>
<tr>
<td>ಆ)</td>
<td>ತಾಂತ್ರಿಕ ಕಾರಣಗಳಿಂದ ಮುಚ್ಚಲಾದ ಗಣಿಗಾರಿಕೆ ಮತ್ತು ಹೊಸದಾಗಿ ಗಣಿಗಾರಿಕೆ ಪ್ರಾರಂಭಿಸಲು ಸರ್ಕಾರಕ್ಕೆ ಜಿಲ್ಲೆಗಳಿಂದ ಪ್ರಸ್ತಾವನೆ ಬಂದಿದೆಯೇ; (ಮಾಹಿತಿ ನೀಡುವುದು);</td>
<td>
<ul>
<li>ಚಾಲ್ತಿ ಗಣಿ ಗುತ್ತಿಗೆ ಪ್ರದೇಶಗಳಲ್ಲಿ ಗಣಿ/ ಕಲ್ಲುಗಣಿಗಾರಿಕೆಗೆ ಶಾಸನಬದ್ಧ ತೀರುವಳಿ ಪತ್ರಗಳನ್ನು ಸಲ್ಲಿಸುವಲ್ಲಿ ವಿಳಂಬ, ಗಣಿಗಾರಿಕೆಗೆ ಸ್ಥಳೀಯ ಸಮಸ್ಯೆಗಳು, ಮಾರುಕಟ್ಟೆಯ ಕುಸಿತ, ಇತ್ಯಾದಿ ಸಮಸ್ಯೆಗಳಿಂದ ನಿಷ್ಕ್ರಿಯವಾಗಿರುತ್ತವೆ.</li>
<li>ಗುತ್ತಿಗೆದಾರರು ಗಣಿಗಾರಿಕೆ ನಡೆಸಲು ಶಾಸನಬದ್ಧ ತೀರುವಳಿಗಳನ್ನು ಸಲ್ಲಿಸಿ, ಸಮಸ್ಯೆಗಳನ್ನು ಬಗೆಹರಿಸಿಕೊಂಡು ಗಣಿಗಾರಿಕೆಯನ್ನು ಪುನ: ಪ್ರಾರಂಭಿಸಬಹುದಾಗಿದ್ದು, ಸದರಿ ಗಣಿ ಗುತ್ತಿಗೆ ಪ್ರದೇಶಗಳಲ್ಲಿ ಹೊಸದಾಗಿ ಗಣಿಗಾರಿಕೆಗೆ ಗುತ್ತಿಗೆ ಮಂಜೂರಾತಿಗೆ ಪ್ರಸ್ತಾವನೆಗಳು ಸ್ವೀಕೃತಗೊಂಡಿರುವುದಿಲ್ಲ.</li>
<li>ಮುಖ್ಯ ಖನಿಜ ಗಣಿ ಗುತ್ತಿಗೆಗಳನ್ನು ಹರಾಜು ಮೂಲಕ ಮಂಜೂರು ಮಾಡಲಾಗುತ್ತಿದ್ದು, ಜಿಲ್ಲೆಯಿಂದ ಹೊಸದಾಗಿ ಗಣಿಗಾರಿಕೆಗೆ ಯಾವುದೇ ಪ್ರಸ್ತಾವನೆಗಳು ಸ್ವೀಕೃತಗೊಂಡಿರುವುದಿಲ್ಲ.</li>
<li>ಕಲ್ಲು ಗಣಿ ಗುತ್ತಿಗೆ ಮಂಜೂರಾತಿ ಸಂಬಂಧ ದಿನಾಂಕ: 12-08-2016ರ ಪೂರ್ವದಲ್ಲಿ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸಲಾಗಿದ್ದು, ಸದರಿ ಅರ್ಜಿಗಳ ಪ್ರದೇಶಕ್ಕೆ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದ ನಂತರ ಕಲ್ಲುಗಣಿ ಗುತ್ತಿಗೆ ಮಂಜೂರಾತಿಗೆ ಕ್ರಮವಹಿಸಲಾಗುತ್ತಿದೆ.</li>
<li>ಪಟ್ಟಾ ಜಮೀನುಗಳಲ್ಲಿ ಅಲಂಕಾರಿಕ ಶಿಲೆ, ಕಟ್ಟಡ ಕಲ್ಲು ಮತ್ತು ಮರಳು ಗಣಿಗಾರಿಕೆಗೆ ಪಟ್ಟಾದಾರರಿಗೆ ಅಥವಾ ಪಟ್ಟಾದಾರರು ಒಪ್ಪಿಗೆ ನೀಡುವ ವ್ಯಕ್ತಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರ, ಭೂಪರಿವರ್ತನೆ ಆದೇಶ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಜಿಲ್ಲಾ ಟಾಸ್ಕ ಪೋರ್ಸ್ (ಗಣಿ) ಸಮಿತಿಯಲ್ಲಿ ಮಂಡಿಸಿ ಅನುಮೋದನೆ ಪಡೆದು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು/ಹಿರಿಯ ಭೂವಿಜ್ಞಾನಿ ರವರಿಂದ ಕಲ್ಲುಗಣಿಗಾರಿಕೆಗೆ ಲೈಸೆನ್ಸ್ ನೀಡಲು ಕ್ರಮವಹಿಸಲಾಗುತ್ತಿದೆ.</li>
</ul>
</td>
</tr>
<tr>
<td>ಇ)</td>
<td>ಹೊಸದಾಗಿ ಗಣಿಗಾರಿಕೆ ಪ್ರಾರಂಭಿಸಲು ಸರ್ಕಾರದ ಮಾನದಂಡನೆಗಳೇನು; ಮಾಹಿತಿ ನೀಡುವುದು?</td>
<td>ಮುಖ್ಯ ಖನಿಜ ಗಣಿಗಾರಿಕೆ:-<br>ಮುಖ್ಯ ಖನಿಜಗಳ ಸಂಬಂಧ ಲಭ್ಯತೆ ದೃಢಪಟ್ಟಿರುವ ಪ್ರದೇಶಗಳಲ್ಲಿ ಎಂಎಂಡಿಆರ್ ತಿದ್ದುಪಡಿ ಕಾಯ್ದೆ, 2015 ರ ಕಲಂ 10(B) ರಡಿಯಲ್ಲಿ ಹರಾಜು ಮೂಲಕ ಗಣಿಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. ಖನಿಜ ಲಭ್ಯತೆ ದೃಢಪಡದ ಪ್ರದೇಶಗಳಲ್ಲಿ ಎಂಎಂಡಿಆರ್ ತಿದ್ದುಪಡಿ ಕಾಯ್ದೆ, 2015 ರ ಕಲಂ 11 ರಡಿಯಲ್ಲಿ ಸಂಯುಕ್ತ ಪರವಾನಿಗೆ (Composite Licence) (Prospecting-cum-Mining Lease) ನ್ನು ಸದರಿ ಕಾಯ್ದೆಯಡಿಯಲ್ಲಿ ರೂಪಿಸಲಾದ Mineral (Auction) Rules, 2015ರ ನಿಯಮ 9 ಮತ್ತು 10 ರಂತೆ ಹರಾಜು ಮಾಡಿ ಯಶಸ್ವಿಯಾದ ಬಿಡ್‌ದಾರರನ್ನು ಪರಿಗಣಿಸಿದ ನಂತರ The Mineral (Auction) Rules, 2015 ಮತ್ತು Mineral (Other Than Atomic and Hydro Carbons Energy Minerals) Concession Rules 2016 ರಡಿ ಗಣಿಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.</td>
</tr>
</table>

| | | |
|---|---|---|
| | | ಉಪಖನಿಜ ಗಣಿಗಾರಿಕೆ :-<br>• ಎಂ.ಎಂ. (ಡಿ & ಆರ್) 1957 ರ ಸೆಕ್ಷನ್-15 ರಂತೆ ರಾಜ್ಯ ಸರ್ಕಾರಗಳಿಗೆ ನೀಡಿರುವ ಅಧಿಕಾರದನ್ವಯ ರಾಜ್ಯದಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆ ಮಂಜೂರಾತಿ ನಿಯಂತ್ರಣ ಕುರಿತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ನ್ನು ಜಾರಿಗೆ ತರಲಾಗಿದ್ದು, ಸದರಿ ನಿಯಮಗಳಂತೆ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆಗಳನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.<br>• ಸರ್ಕಾರಿ ಜಮೀನುಗಳಲ್ಲಿ ಲಭ್ಯವಿರುವ ಉಪಖನಿಜ ನಿಕ್ಷೇಪಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಗುರುತಿಸಿ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆದ ನಂತರ ಅಧಿಸೂಚನೆ ಜಾರಿ ಮಾಡಬೇಕಾಗಿರುತ್ತದೆ. ನಂತರ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ ಗುರುತಿಸಿರುವ ಉಪಖನಿಜದ ನಿಕ್ಷೇಪದ ಪ್ರದೇಶದಲ್ಲಿ ಗಣಿಗಾರಿಕೆ ನಡೆಸಲು ಟೆಂಡರ್ ಕಂ ಹರಾಜು ಪ್ರಕ್ರಿಯೆ ಕೈಗೊಂಡು ನಿರ್ಧಿಷ್ಟ ಉಪಖನಿಜಗಳಿಗೆ ಸರ್ಕಾರದಿಂದ ಮತ್ತು ನಿರ್ಧಿಷ್ಟವಲ್ಲದ ಉಪಖನಿಜಗಳಿಗೆ ಸಂಬಂಧಿಸಿದಂತೆ ನಿರ್ದೇಶಕರಿಂದ ಬಿಡ್ ಸ್ವೀಕರಿಸಿಕೊಂಡ ನಂತರ ಯಶಸ್ವಿ ಬಿಡ್ ದಾರರಿಂದ ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆಯನ್ನು ಮಂಜೂರು ಮಾಡಲಾಗುತ್ತದೆ.<br>• ದಿ:17-03-2023 ರಂದು ಸರ್ಕಾರವು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2023ನ್ನು ಜಾರಿಗೆ ತಂದಿದ್ದು, ದಿನಾಂಕ:12-08-2016ರ ಪೂರ್ವದಲ್ಲಿ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸಲಾಗಿದ್ದು, ಸದರಿ ಅರ್ಜಿಗಳ ಪ್ರದೇಶಕ್ಕೆ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದ ನಂತರ ಕಲ್ಲುಗಣಿ ಗುತ್ತಿಗೆ ಮಂಜೂರಾತಿಗೆ ಕ್ರಮವಹಿಸಬೇಕಾಗಿರುತ್ತದೆ.<br>• ಪಟ್ಟಾ ಜಮೀನುಗಳಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಪಟ್ಟಾದಾರರಿಗೆ ಅಥವಾ ಪಟ್ಟಾದಾರರು ಒಪ್ಪಿಗೆ ನೀಡುವ ವ್ಯಕ್ತಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರ, ಭೂಪರಿವರ್ತನೆ ಆದೇಶ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಜಿಲ್ಲಾ ಟಾಸ್ಕ ಫೋರ್ಸ್ (ಗಣಿ) ಸಮಿತಿಯಲ್ಲಿ ಮಂಡಿಸಿ ಅನುಮೋದನೆ ಪಡೆದು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು/ಹಿರಿಯ ಭೂವಿಜ್ಞಾನಿ ರವರಿಂದ ಕಲ್ಲುಗಣಿಗಾರಿಕೆಗೆ ಲೈಸೆನ್ಸ್ ನೀಡಲಾಗುತ್ತಿದೆ. |

ಸಂಖ್ಯೆ: ಸಿಐ 210 ಎಂಎಂಎಂ 2025

**(ಎಸ್.ಎಸ್. ಮಲ್ಲಿಕಾರ್ಜುನ್)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು